ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಕಲಬುರಗಿ ವಿಶ್ವ ವಿದ್ಯಾಲಯದ ಮಾಹಿತಿ ಕುರಿತು

ಶ್ರೀ ಶಶಿಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-

592(729) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ವಿಶ್ವ ವಿದ್ಯಾಲಯದಲ್ಲಿ ಮಂಜೂರಾಗಿರುವ ಭೋದಕ ಹಾಗೂ ಭೋದಕೇತರ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;

(ಇ) ಪ್ರಸ್ತುತ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಯಾವಾಗ;

(ಈ) ಖಾಲಿ ಇರುವ ಭೋದಕ/ಭೋದಕೇತರ ಹುದ್ದೆಗಳ ಕಾರಣದಿಂದ ವಿಶ್ವ ವಿದ್ಯಾಲಯದ ಶೈಕ್ಷಣಿಕ ಗುಣಮಟ್ಟ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರ ನೀಡುವುದು)